# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **69 (144)** |
| **ಸದಸ್ಯರ ಹೆಸರು** | **ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | **01.02.2021** |
| **ಉತ್ತರಿಸಬೇಕಾದ ಸಚಿವರು** | **ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)** |

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿಯಿರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳು ಎಷ್ಟು; | ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿಯಿರುವ ಸಹಾಯಕ ಪ್ರಾಧ್ಯಾಪಕ ಹುದ್ದೆಗಳ ವಿವರಗಳು ಈ ಕೆಳಕಂಡಂತಿವೆ;<br>ಮಂಜೂರಾದ ಹುದ್ದೆಗಳು: 7604<br>ಕಾರ್ಯನಿರತ ಹುದ್ದೆಗಳು: 6121<br>ಖಾಲಿಯಿರುವ ಹುದ್ದೆಗಳು: 1483 |
| (ಆ) | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿರುವ ಸಂಖ್ಯೆ ಎಷ್ಟು; | 2020–21ನೇ ಶೈಕ್ಷಣಿಕ ಸಾಲಿನಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಒಟ್ಟು 14183 ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಈ ಪೈಕಿ ಶೇಕಡ 50 ರಷ್ಟು (7091) ಅತಿಥಿ ಉಪನ್ಯಾಸಕರನ್ನು ಮಾತ್ರ ಆಯ್ಕೆ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ. |
| (ಇ) | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿರುವವರ ಯು.ಜಿ.ಸಿ. ನಿಯಮಾವಳಿಯಂತೆ ವಿದ್ಯಾರ್ಹತೆ ಪಡೆದಿರುವವರನ್ನು ಖಾಯಂಗೊಳಿಸಲು ಸರ್ಕಾರಕ್ಕಿರುವ ಅಡೆ-ತಡೆಗಳೇನು? | ಸರ್ಕಾರಿ ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆಗೆ ಅನುಗುಣವಾಗಿ ಉಂಟಾಗುವ ಕಾರ್ಯಭಾರವನ್ನು ಮೊದಲು ಆಯಾ ಕಾಲೇಜಿನ ಖಾಯಂ ಅಧ್ಯಾಪಕರುಗಳಿಗೆ ಹಂಚಿಕೆ ಮಾಡಿ, ತದನಂತರ ಉಳಿಕೆಯಾಗುವ ಹೆಚ್ಚುವರಿ ಕಾರ್ಯಭಾರಕ್ಕೆ ಆಯಾ ಶೈಕ್ಷಣಿಕ ವರ್ಷಕ್ಕೆ ಸೀಮಿತಗೊಳಿಸಿ ತಾತ್ಕಾಲಿಕವಾಗಿ ಕಲಾ ಮತ್ತು ವಾಣಿಜ್ಯ ವಿಷಯಕ್ಕೆ ವಾರಕ್ಕೆ ಗರಿಷ್ಠ 8 ಗಂಟೆ ಹಾಗೂ ವಿಜ್ಞಾನ ವಿಷಯಕ್ಕೆ 10 ಗಂಟೆಗಳ ಕಾರ್ಯಭಾರಕ್ಕೆ ಮಾತ್ರ ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲಾಗುತ್ತಿದೆ.<br><br>ಅಲ್ಲದೆ, ಅತಿಥಿ ಉಪನ್ಯಾಸಕರನ್ನು ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ ಮಾತ್ರ ಆಯ್ಕೆ ಮಾಡಿಕೊಳ್ಳಲಾಗುತ್ತಿದ್ದು, ಯಾವುದೇ ಖಾಲಿ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಾಗುತ್ತಿಲ್ಲ. ಆದ್ದರಿಂದ ಅವರುಗಳ ತಾತ್ಕಾಲಿಕ ಸೇವೆಯನ್ನು ಪರಿಗಣಿಸಿ ಖಾಯಂ ಮಾಡಲು ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |

| | | |
|---|---|---|
| | | ಅಲ್ಲದೆ, ಕರ್ನಾಟಕ ಆಡಳಿತ ನ್ಯಾಯಮಂಡಳಿಯು (ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಂವಿಧಾನ ಪೀಠವು ಉಮಾದೇವಿ ಪ್ರಕರಣದಲ್ಲಿ ನೀಡಿರುವ ತೀರ್ಪನ್ನು ಆಧರಿಸಿ) ಸೇವಾ ಸಕ್ರಮಾತಿ ಕೋರಿ ಅತಿಥಿ ಉಪನ್ಯಾಸಕರುಗಳು ಸಲ್ಲಿಸಿದ ಅರ್ಜಿಗಳನ್ನು ವಜಾಗೊಳಿಸಿರುವ ಹಿನ್ನಲೆಯಲ್ಲಿ ನಿಯಮಾನುಸಾರ ನೇಮಕವಾಗದಿರುವ ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸಲು ಅವಕಾಶವಿರುವುದಿಲ್ಲ. |

**ಇಡಿ 30 ಡಿಪಿಇ 2021**

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)